## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 2022-23ನೇ ಶೈಕ್ಷಣಿಕ ಸಾಲಿಗೆ ಇಂಜಿನಿಯರಿಂಗ್/ಆರ್ಕಿಟೆಕ್ಚರ್ ಕೋರ್ಸುಗಳಿಗೆ ಸಂಬಂಧಿಸಿದಂತೆ ಖಾಸಗಿ ವಿಶ್ವವಿದ್ಯಾಲಯ/ಡೀಮ್ಡ್ ವಿಶ್ವವಿದ್ಯಾಲಯಗಳಲ್ಲಿ ಸರ್ಕಾರಿ ಕೋಟಾದ ಸೀಟುಗಳಿಗೆ ಶುಲ್ಕ ನಿಗದಿಪಡಿಸುವ ಬಗ್ಗೆ.

**ಓದಲಾಗಿದೆ:-**

1. ಸರ್ಕಾರದ ಆದೇಶ ಸಂಖ್ಯೆ:ಇಡಿ 80 ಟಿಇಸಿ 2019, ದಿನಾಂಕ:09.10.2020.
2. ಸರ್ಕಾರದ ಆದೇಶ ಸಂಖ್ಯೆ:ಇಡಿ 146 ಟಿಇಸಿ 2020, ದಿನಾಂಕ:19.09.2020.
3. ಸರ್ಕಾರದ ಆದೇಶ ಸಂಖ್ಯೆ: ಇಡಿ 222 ಟಿಇಸಿ 2021, ದಿನಾಂಕ:04.11.2021.
4. ಸರ್ಕಾರದ ಆದೇಶ ಸಂಖ್ಯೆ: ಇಡಿ 195 ಟಿಇಸಿ 2022, ದಿನಾಂಕ: 07.10.2022

**ಪ್ರಸ್ತಾವನೆ:-**

ಖಾಸಗಿ ವಿಶ್ವವಿದ್ಯಾಲಯ/ಡೀಮ್ಡ್ ವಿಶ್ವವಿದ್ಯಾಲಯಗಳಲ್ಲಿ ನಡೆಸುವ ತಾಂತ್ರಿಕ ಕೋರ್ಸುಗಳಿಗೆ ಸಂಬಂಧಿಸಿದಂತೆ, ಖಾಸಗಿ ವಿಶ್ವವಿದ್ಯಾಲಯಗಳ ಅಧಿನಿಯಮದನ್ವಯ ಪ್ರತಿ ಕೋರ್ಸಿನ ವಿದ್ಯಾರ್ಥಿಗಳ ಪ್ರವೇಶಾತಿಯಲ್ಲಿ ಶೇ.40 ರಷ್ಟು ಸೀಟುಗಳು ಸರ್ಕಾರಿ ಸೀಟುಗಳಾಗಿರುತ್ತವೆ. ಈ ಶೇಕಡವಾರು ಪ್ರಮಾಣದ ಸೀಟುಗಳನ್ನು ಸರ್ಕಾರದ ವತಿಯಿಂದ ಭರ್ತಿ ಮಾಡಬೇಕು ಮತ್ತು ಬೋಧನಾ ಶುಲ್ಕವನ್ನು ನಿಗಡಿಪಡಿಸಬೇಕು. ಅದರಂತೆ, 2022-23ನೇ ಶೈಕ್ಷಣಿಕ ಸಾಲಿನ ಸೀಟುಗಳನ್ನು ಸರ್ಕಾರದ ವತಿಯಿಂದ ಸೀಟ್ ಮ್ಯಾಟ್ರಿಕ್ಸ್ ಮೂಲಕ ಹಂಚಿಕೆ ಮಾಡಲು ಕರ್ನಾಟಕ ಪರೀಕ್ಷಾ ಪ್ರಾಧಿಕಾರಕ್ಕೆ ವಹಿಸಲಾಗಿದೆ. 2022-23ನೇ ಶೈಕ್ಷಣಿಕ ಸಾಲಿನ ಸೀಟುಗಳ ಪ್ರವೇಶಾತಿಗೆ ಸರ್ಕಾರವು ಬೋಧನಾ ಶುಲ್ಕವನ್ನು ನಿಗದಿಪಡಿಸುವ ನಿಟ್ಟಿನಲ್ಲಿ ಕ್ರಮವಹಿಸಬೇಕಾಗಿರುತ್ತದೆ.

ಗೀತಂ ವಿಶ್ವವಿದ್ಯಾಲಯವು ಒಂದು ಆಫ್ ಕ್ಯಾಂಪಸ್ ವಿಶ್ವವಿದ್ಯಾಲಯವಾಗಿದ್ದು, ಪ್ರತಿ ಕೋರ್ಸಿನ ವಿದ್ಯಾರ್ಥಿ ಪ್ರವೇಶಾತಿಯಲ್ಲಿ ಶೇ.25ರಷ್ಟು ಪ್ರಮಾಣದ ಸೀಟುಗಳನ್ನು ಕರ್ನಾಟಕದ ವಿದ್ಯಾರ್ಥಿಗಳಿಂದ ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ರಾಜ್ಯ ಸರ್ಕಾರವು ನಿಗದಿಪಡಿಸಿದ ಶುಲ್ಕವನ್ನು ಪಡೆದು ಭರ್ತಿ ಮಾಡಲು ಕ್ರಮವಹಿಸಬೇಕಾಗಿರುತ್ತದೆ.

ಪ್ರಕರಣದಲ್ಲಿ ಒದಗಿ ಬಂದ ಸಂದರ್ಭ, ಸನ್ನಿವೇಶ ಮತ್ತು ದಾಖಲೆಗಳನ್ನು ಕೂಲಂಕಷವಾಗಿ ಪರಿಶೀಲಿಸಲಾಗಿ, ಈ ಹಿಂದೆ, ಖಾಸಗಿ ವೃತ್ತಿಪರ ಶಿಕ್ಷಣ ಸಂಸ್ಥೆಗಳ ಸರ್ಕಾರಿ ಕೋಟಾದ ಸೀಟುಗಳಿಗೆ ನಿಗದಿಪಡಿಸಿದ ಬೋಧನಾ ಶುಲ್ಕದ ದರವನ್ನು ಆಧರಿಸಿ, ಖಾಸಗಿ ವಿಶ್ವವಿದ್ಯಾಲಯಗಳ ಬೋಧನಾ ಶುಲ್ಕವನ್ನು ನಿಗದಿಪಡಿಸಿರುವುದು ಕಂಡುಬರುತ್ತದೆ. ಆದಕಾರಣ, ಇದೇ ಮಾನದಂಡವನ್ನು ಆಧರಿಸಿ, 2021-22ನೇ ಶೈಕ್ಷಣಿಕ ಸಾಲಿಗೆ ವೃತ್ತಿಪರ ಶಿಕ್ಷಣ ಸಂಸ್ಥೆಗಳ ಸರ್ಕಾರಿ ಕೋಟಾದ ಸೀಟುಗಳಿಗೆ ಮೇಲೆ ಓದಲಾದ ಕ್ರಮ ಸಂಖ್ಯೆ (3)ರ ಆದೇಶದಲ್ಲಿ ನಿಗದಿಪಡಿಸಿರುವ ಬೋಧನಾ ಶುಲ್ಕ ಮತ್ತು ಇತರೆ ಶುಲ್ಕಗಳ ದರಗಳ ಸರಾಸರಿ ಮೊತ್ತವನ್ನು 2021-2ನೇ ಶೈಕ್ಷಣಿಕ ಸಾಲಿಗೆ ಖಾಸಗಿ ವಿಶ್ವವಿದ್ಯಾಲಯಗಳ ಸರ್ಕಾರಿ ಕೋಟಾದ ಸೀಟುಗಳಿಗೆ ಬೋಧನಾ ಶುಲ್ಕವನ್ನಾಗಿ ನಿಗದಿಪಡಿಸಲಾಗಿತ್ತು.

2022-23ನೇ ಶೈಕ್ಷಣಿಕ ಸಾಲಿಗೆ ಸರ್ಕಾರಿ ಕೋಟಾದಡಿ ಪ್ರವೇಶಾತಿ ಪಡೆಯುವ ವಿದ್ಯಾರ್ಥಿಗಳಿಗೆ ಸಂಬಂಧಿಸಿದಂತೆ, ದಿನಾಂಕ:22.06.2022 ರಂದು ಮಾನ್ಯ ಉನ್ನತ ಶಿಕ್ಷಣ ಸಚಿವರ ಅಧ್ಯಕ್ಷತೆಯಲ್ಲಿ ಖಾಸಗಿ ವೃತ್ತಿಪರ ಶಿಕ್ಷಣ ಸಂಸ್ಥೆಗಳ ಒಕ್ಕೂಟ/ಪ್ರತಿನಿಧಿಗಳಾದ KUPECA ಮತ್ತು KRLMPCA ಪದಾಧಿಕಾರಿಗಳೊಂದಿಗೆ ನಡೆದ ಸಭೆಯಲ್ಲಿ ಬೋಧನಾ ಶುಲ್ಕ ನಿಗದಿಯ ಬಗ್ಗೆ ಮತ್ತು ಸೀಟು ಹಂಚಿಕೆ ಪ್ರಮಾಣ, ಖಾಸಗಿ ಶಿಕ್ಷಣ ಸಂಸ್ಥೆಗಳು ಎದುರಿಸುತ್ತಿರುವ ಸಮಸ್ಯೆಗಳು, ಇದರ ಮಾರ್ಗೋಪಾಯಗಳು ಇತ್ಯಾದಿಗಳ ಬಗ್ಗೆ ವಿಸ್ತೃತವಾಗಿ ಚರ್ಚಿಸಲಾಯಿತು. 2022-23ನೇ ಶೈಕ್ಷಣಿಕ ಸಾಲಿಗೆ ಸರ್ಕಾರಿ/ವಿಶ್ವವಿದ್ಯಾಲಯ/ಖಾಸಗಿ ಅನುದಾನಿತ/ಖಾಸಗಿ ಅನುದಾನರಹಿತ ಇಂಜಿನಿಯರಿಂಗ್ ಮತ್ತು ಆರ್ಕಿಟೆಕ್ಚರ್ ಕಾಲೇಜುಗಳಲ್ಲಿ ಪ್ರವೇಶಾತಿ ಪಡೆಯುವ ವಿದ್ಯಾರ್ಥಿಗಳು ಭರಿಸಬೇಕಾದ ಬೋಧನಾ ಶುಲ್ಕದಲ್ಲಿ ಶೇ.10ರಷ್ಟು ಹೆಚ್ಚಿಸಿ ಹಾಗೂ ಸೀಟು ಹಂಚಿಕೆ ಪ್ರಮಾಣವನ್ನು ಹಿಂದಿನ ಶೈಕ್ಷಣಿಕ ಸಾಲಿನಲ್ಲಿರುವಂತೆಯೇ ಯಥಾವತ್ತಾಗಿ ಮುಂದುವರೆಸಲು ತೀರ್ಮಾನಿಸಲಾಯಿತು.

2022-23ನೇ ಶೈಕ್ಷಣಿಕ ಸಾಲಿನಲ್ಲಿ ವೃತ್ತಿ ಶಿಕ್ಷಣ ಕೋರ್ಸುಗಳಿಗೆ ಪ್ರವೇಶಾತಿ ಪಡೆಯುವ ಸಂದರ್ಭದಲ್ಲಿ ರೂ.20,000/-ಗಳನ್ನು ಮೀರದಂತೆ ಇತರೆ ಶುಲ್ಕವನ್ನು ಪ್ರತಿ ವಿದ್ಯಾರ್ಥಿಯಿಂದ ಕರ್ನಾಟಕ ಪರೀಕ್ಷಾ ಪ್ರಾಧಿಕಾರದವರು ಪಡೆಯಲು ಹಾಗೂ ತದನಂತರದ ಶೈಕ್ಷಣಿಕ ವರ್ಷಗಳಲ್ಲಿ ಇತರೆ ಶುಲ್ಕವನ್ನು ಸಂಬಂಧಿಸಿದ ಶಿಕ್ಷಣ ಸಂಸ್ಥೆಯವರು ಪಡೆಯುವ ಬಗ್ಗೆ, ಸದರಿ ಸಭೆಯಲ್ಲಿ ನಿರ್ಣಯಿಸಲಾಯಿತು.

ಈ ಎಲ್ಲಾ ಅಂಶಗಳನ್ನೊಳಗೊಂಡಂತೆ KUPECA ಮತ್ತು KRLMPCA ರವರೊಂದಿಗೆ ದಿನಾಂಕ:18.08.2022 ರಂದು ಸಮ್ಮತಾಭಿಪ್ರಾಯದ ಒಡಂಬಡಿಕೆಯನ್ನು ಮಾಡಿಕೊಳ್ಳಲಾಗಿದೆ.

ಅದೇ ರೀತಿಯಾಗಿ, 2022-23ನೇ ಸಾಲಿಗೆ ಖಾಸಗಿ ವೃತ್ತಿಪರ ಶಿಕ್ಷಣ ಸಂಸ್ಥೆಗಳ ಸರ್ಕಾರಿ ಕೋಟಾದ ಸೀಟುಗಳಿಗೆ ಮೇಲೆ ಕ್ರಮಸಂಖ್ಯೆ (4) ರಲ್ಲಿ ಓದಲಾದ ಆದೇಶದಲ್ಲಿ ನಿಗದಿಪಡಿಸಿದ ಶುಲ್ಕದ ದರಗಳ ಸರಾಸರಿ ಮೊತ್ತವನ್ನು ಬೋಧನಾ ಶುಲ್ಕವನ್ನಾಗಿ ನಿಗದಿಪಡಿಸಲು ಮತ್ತು ಖಾಸಗಿ ವೃತ್ತಿಪರ ಶಿಕ್ಷಣ ಸಂಸ್ಥೆಗಳಿಗೆ ಇತರೆ ಶುಲ್ಕಗಳನ್ನು ನಿಗದಿಪಡಿಸಲು ಅನುಸರಿಸಿರುವ ಮಾನದಂಡದಂತೆಯೇ ಖಾಸಗಿ ವಿಶ್ವವಿದ್ಯಾಲಯ/ ಡೀಮ್ಡ್ ವಿಶ್ವವಿದ್ಯಾಲಯಗಳಿಗೂ ಸಹ ಅನುಸರಿಸಿ ಇತರ ಶುಲ್ಕ ವನ್ನು ನಿಗದಿಪಡಿಸಲು ಸರ್ಕಾರವು ನಿರ್ಣಯಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಇಡಿ 254 ಟಿಇಸಿ 2022**
**ಬೆಂಗಳೂರು, ದಿನಾಂಕ: 07ನೇ ಅಕ್ಟೋಬರ್ 2022**

1. ಪ್ರಸ್ತಾವನೆಯಲ್ಲಿ ವಿವರಿಸುವ ಕಾರಣಗಳ ಹಿನ್ನಲೆಯಲ್ಲಿ, 2022-23ನೇ ಶೈಕ್ಷಣಿಕ ಸಾಲಿಗೆ ಖಾಸಗಿ ವಿಶ್ವವಿದ್ಯಾಲಯಗಳು/ಡೀಮ್ಡ್ ವಿಶ್ವವಿದ್ಯಾಲಯಗಳು ವಿಶ್ವವಿದ್ಯಾಲಯದ ಅಧಿನಿಯಮದಲ್ಲಿ ಉಲ್ಲೇಖಿಸಿರುವ ಸರ್ಕಾರಿ ಕೋಟಾದ ಶೇಕಡವಾರು ಪ್ರಮಾಣದ ಸೀಟುಗಳಿಗೆ ಬೋಧನಾ ಶುಲ್ಕವಾಗಿ ರೂ.64,686/- ನಿಗಧಿಪಡಿಸಿ ಆದೇಶಿಸಿದೆ. ವೃತ್ತಿಪರ ಕೋರ್ಸುಗಳಿಗೆ ಪ್ರವೇಶಾತಿ ಪಡೆಯುವ ಸಂದರ್ಭದಲ್ಲಿಯೇ ಪ್ರಥಮ ವರ್ಷದ ಬೋಧನಾ ಶುಲ್ಕ ಮತ್ತು ಇತರೆ ಶುಲ್ಕಗಳನ್ನು ಪ್ರತಿ ವಿದ್ಯಾರ್ಥಿಯಿಂದ ಕರ್ನಾಟಕ ಪರೀಕ್ಷಾ ಪ್ರಾಧಿಕಾರವೇ ಪಡೆಯತಕ್ಕದ್ದು. ಈ ಸಂಬಂಧ ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ವೆಬ್‌ಸೈಟ್‌ನಲ್ಲಿ ಮುಂಚಿತವಾಗಿಯೇ ಪ್ರಕಟಿಸಬೇಕು. ಎಲ್ಲಾ ಖಾಸಗಿ ವಿಶ್ವವಿದ್ಯಾಲಯಗಳು/ಡೀಮ್ಡ್ ವಿಶ್ವವಿದ್ಯಾಲಯಗಳು ಮೇಲೆ ನಿಗದಿಪಡಿಸಿದ ಬೋಧನಾ ಶುಲ್ಕವನ್ನು ಮಾತ್ರ ತದನಂತರದ ಶೈಕ್ಷಣಿಕ ವರ್ಷಗಳಲ್ಲಿ ಪಡೆಯತಕ್ಕದ್ದು.

2. 2022-23ನೇ ಶೈಕ್ಷಣಿಕ ಸಾಲಿನಲ್ಲಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಖಾಸಗಿ ವಿಶ್ವವಿದ್ಯಾಲಯಗಳ/ ಡೀಮ್ಡ್ ವಿಶ್ವವಿದ್ಯಾಲಯಗಳ ವೃತ್ತಿ ಶಿಕ್ಷಣ ಕೋರ್ಸುಗಳಿಗೆ ಪ್ರವೇಶಾತಿ ಪಡೆಯುವ ಸಂದರ್ಭದಲ್ಲಿ ಪ್ರತಿ ವಿದ್ಯಾರ್ಥಿಯಿಂದ ರೂ.20,000/-ಗಳನ್ನು ಮೀರದಂತೆ ಇತರೆ ಶುಲ್ಕವನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರದವರು

ಪಡೆಯತಕ್ಕದ್ದು. ಇತರೆ ಶುಲ್ಕದ ವಸೂಲಾತಿಯ item wise break-up ವಿವರಗಳನ್ನು ಖಾಸಗಿ ವಿಶ್ವವಿದ್ಯಾಲಯಗಳ/ ಡೀಮ್ಡ್ ವಿಶ್ವವಿದ್ಯಾಲಯಗಳ ಅಧಿಕೃತ ಜಾಲತಾಣದಲ್ಲಿ ಕೂಡಲೇ ಸಾರ್ವಜನಿಕರ ಮಾಹಿತಿಗಾಗಿ ಪ್ರಚುರಪಡಿಸತಕ್ಕದ್ದು.

3. ಸರ್ಕಾರಿ ಕೋಟಾದಡಿಯಲ್ಲಿ ಆಯ್ಕೆಯಾಗಿರುವ ಎಲ್ಲಾ ವಿದ್ಯಾರ್ಥಿಗಳಿಂದ ಮೇಲಿನಂತೆ ಬೋಧನಾ ಶುಲ್ಕ ಹಾಗೂ ಇತರೆ ಶುಲ್ಕವನ್ನು ಹೊರತುಪಡಿಸಿ ವಿಶ್ವವಿದ್ಯಾಲಯದ ಹಂತದಲ್ಲಿ, ತದನಂತರದ ಶೈಕ್ಷಣಿಕ ವರ್ಷಗಳಲ್ಲಿ ಯಾವುದೇ ಇತರೆ ಶುಲ್ಕಗಳನ್ನು ಪಡೆಯಲು ವಿಶ್ವವಿದ್ಯಾಲಯದ ಆಡಳಿತ ಮಂಡಳಿಗಳು ಬೇಡಿಕೆ ಮಾಡತಕ್ಕದ್ದಲ್ಲ ಅಥವಾ ವಸೂಲಾತಿ ಮಾಡಬಾರದು.

4. ಕೌನ್ಸಿಲಿಂಗ್ ಪೂರ್ಣಗೊಂಡ ನಂತರ 2 ತಿಂಗಳೊಳಗಾಗಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ವಿದ್ಯಾರ್ಥಿಗಳಿಂದ ಪಡೆದ ಬೋಧನಾ ಶುಲ್ಕ ಮತ್ತು ಇತರೆ ಶುಲ್ಕವನ್ನು ಆಯಾಯ ಖಾಸಗಿ ವಿಶ್ವವಿದ್ಯಾಲಯಗಳಿಗೆ/ ಡೀಮ್ಡ್ ವಿಶ್ವವಿದ್ಯಾಲಯಗಳಿಗೆ ವರ್ಗಾಯಿಸಲು ಕ್ರಮ ತೆಗೆದುಕೊಳ್ಳತಕ್ಕದ್ದು. ಕರ್ನಾಟಕ ಪರೀಕ್ಷಾ ಪ್ರಾಧಿಕಾರದವರು ನಡೆಸುವ ವೃತ್ತಿಪರ ಕೋರ್ಸುಗಳಿಗೆ ಕೌನ್ಸಿಲಿಂಗ್ ಮುಖಾಂತರ ಆಯ್ಕೆಯಾಗುವ ವಿದ್ಯಾರ್ಥಿಗಳು ಮೇಲಿನಂತೆ ಶುಲ್ಕಗಳನ್ನು ಪಾವತಿಸಿದ ತರುವಾಯ, ಸದರಿ ವಿದ್ಯಾರ್ಥಿಗಳಿಂದ ಖಾಸಗಿ ವಿಶ್ವವಿದ್ಯಾಲಯಗಳು/ ಡೀಮ್ಡ್ ವಿಶ್ವವಿದ್ಯಾಲಯಗಳು ಯಾವುದೇ ಶುಲ್ಕವನ್ನು ಪಡೆಯುವಂತಿಲ್ಲ.

5. ಪ್ರವೇಶಾತಿ ಪಡೆದ ವಿದ್ಯಾರ್ಥಿಗಳು ಕಾರಣಾಂತರಗಳಿಂದ ಒಂದು ವೇಳೆ ವಿದ್ಯಾಭ್ಯಾಸವನ್ನು ಮೊಟಕುಗೊಳಿಸಿದ್ದಲ್ಲಿ, ಸದರಿ ವಿದ್ಯಾರ್ಥಿಗಳು ಪ್ರವೇಶಾತಿ ಸಂದರ್ಭದಲ್ಲಿ ಸಂಸ್ಥೆಗೆ ಸಲ್ಲಿಸಲ್ಪಟ್ಟ ಮೂಲ ದಾಖಲೆಗಳನ್ನು ಮತ್ತು ಬೋಧನಾ ಶುಲ್ಕ/ಹಾಸ್ಟೆಲ್ ಶುಲ್ಕವನ್ನು ತಕ್ಷಣವೇ ಹಿಂದಿರುಗಿಸುವ ಬಗ್ಗೆ ಖಾಸಗಿ ವಿಶ್ವವಿದ್ಯಾಲಯಗಳು/ ಡೀಮ್ಡ್ ವಿಶ್ವವಿದ್ಯಾಲಯಗಳು ಕ್ರಮವಹಿಸುವುದು. ಈ ಬಗ್ಗೆ ಕಾಲಕಾಲಕ್ಕೆ ಎಐಸಿಟಇ, ನವದೆಹಲಿ ಇವರು ಹೊರಡಿಸಿರುವ ಮಾರ್ಗಸೂಚಿ/ನಿಯಮಗಳನ್ನು ತಪ್ಪದೇ ಪಾಲಿಸುವುದು.

6. 2022-23ನೇ ಶೈಕ್ಷಣಿಕ ಸಾಲಿಗೆ ಎಲ್ಲಾ ಖಾಸಗಿ ವಿಶ್ವವಿದ್ಯಾಲಯಗಳು/ ಡೀಮ್ಡ್ ವಿಶ್ವವಿದ್ಯಾಲಯಗಳು ವೃತ್ತಿಪರ ಇಂಜಿನಿಯರಿಂಗ್/ಆರ್ಕಿಟೆಕ್ಚರ್ ಕೋರ್ಸುಗಳಿಗೆ ಪ್ರವೇಶಾತಿ ಪ್ರಕ್ರಿಯೆ ಮತ್ತು ಶುಲ್ಕ ನಿಗದಿಯನ್ನು ಈ ಆದೇಶದನ್ವಯವೇ ಅನುಷ್ಠಾನಗೊಳಿಸತಕ್ಕದ್ದು.

7. ಪ್ರವೇಶಾತಿಗಾಗಿ ನಿಗದಿಪಡಿಸಿದ ಅವಧಿಯೊಳಗಾಗಿ ಪ್ರವೇಶಾತಿ ಪಡೆಯಲು ವಿಫಲರಾದ ಅಭ್ಯರ್ಥಿಗಳ ಸೀಟುಗಳು ರದ್ದಾಗುವುದು ಮತ್ತು ಈ ಬಗ್ಗೆ ಶುಲ್ಕ ಮುಟ್ಟುಗೋಲು/ದಂಡ ವಿಧಿಸುವಿಕೆ ಇತ್ಯಾದಿಗಳ ಬಗ್ಗೆ ಇರುವ ನಿಯಮಗಳನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರ/ಖಾಸಗಿ ವಿಶ್ವವಿದ್ಯಾಲಯಗಳು/ ಡೀಮ್ಡ್ ವಿಶ್ವವಿದ್ಯಾಲಯಗಳು ಸರ್ಕಾರವು ದಿನಾಂಕ:04.11.2020ರ ಅಧಿಸೂಚನೆ ಸಂಖ್ಯೆ:ಇಡಿ 147 ಟಿಇಸಿ 2020ರಲ್ಲಿ ಹೊರಡಿಸಿರುವಂತೆ "If a Candidates does not surrender the allotted a seat in any discipline in an Engineering College or Institution under sub-rule (4) of Rule 10 or fail to join the allotted college even after the completion of the casual vacancy round, the Executive Director, Karnataka Examination Authority shall forfeit the entire fee amount paid by the candidates and the candidate shall be liable to pay a penalty of five times of the fee."ರಂತೆ ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಇವರು ಕ್ರಮ ಕೈಗೊಳ್ಳತಕ್ಕದ್ದು.

8. The Private Universities shall report to the Karnataka Examination Authority regarding status of admission of the candidate that remained unfilled or candidates desirous to surrender the seats, well in time to the Karnataka Examination Authority so that, necessary action can be taken to fill up the seats. Because of the non-reporting by Private Universities, if the seats remain unfilled, then the concerned Private University shall pay penalty of five times of the fee."

9. ಖಾಸಗಿ ವಿಶ್ವವಿದ್ಯಾಲಯಗಳ ಮತ್ತು ಡೀಮ್ಡ್ ವಿಶ್ವವಿದ್ಯಾಲಯಗಳ ಕುಲಪತಿಗಳು A.I.C.T.E ಮತ್ತು U.G.C. ಯು ನಿಗದಿಪಡಿಸಿರುವ ಮಾರ್ಗಸೂಚಿಗಳನ್ವಯ Mandatory Discloouresನ್ನು ತಮ್ಮ ವಿಶ್ವವಿದ್ಯಾಲಯದ ಅಧಿಕೃತ ವೆಬ್‌ಸೈಟ್‌ನಲ್ಲಿ ಕೂಡಲೇ ಪ್ರಕಟಿಸಬೇಕು.

**ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ**
**ಮತ್ತು ಅವರ ಹೆಸರಿನಲ್ಲಿ.**

A. C. Madhu 9/10/22

**(ಮಧು ಎ.ಸಿ)**
**ಸರ್ಕಾರದ ಅಧೀನ ಕಾರ್ಯದರ್ಶಿ,**
**ಉನ್ನತ ಶಿಕ್ಷಣ ಇಲಾಖೆ (ತಾಂತ್ರಿಕ)**

9/10/22

ಗೆ,

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು ರವರು ಇದನ್ನು ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಿಸಿ ಸರ್ಕಾರಕ್ಕೆ 100 ಪ್ರತಿಗಳನ್ನು ಕಳುಹಿಸಲು ಕೋರಿದೆ.

ಪ್ರತಿ:

1) ಕುಲಪತಿಗಳು, ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ, ಜ್ಞಾನಸಂಗಮ, ಬೆಳಗಾವಿ.
2) ಎಲ್ಲಾ ಖಾಸಗಿ ವಿಶ್ವವಿದ್ಯಾಲಯಗಳ ಕುಲಪತಿಗಳಿಗೆ.
3) ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
4) ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ಪರೀಕ್ಷಾ ಪ್ರಾಧಿಕಾರ, 16ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು.
5) ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
6) ಮಾನ್ಯ ಉನ್ನತ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
7) ಸರ್ಕಾರದ ಕಾರ್ಯದರ್ಶಿ, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನಾ ಇಲಾಖೆ, ವಿಧಾನಸೌಧ, ಬೆಂಗಳೂರು.
8) ಎಲ್ಲಾ ಖಾಸಗಿ ವಿಶ್ವವಿದ್ಯಾಲಯಗಳ ಕುಲಪತಿಗಳಿಗೆ.
9) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ ರವರ ಆಪ್ತ ಕಾರ್ಯದರ್ಶಿ.
10) ಸರ್ಕಾರದ ಉಪ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ(ವಿಶ್ವವಿದ್ಯಾಲಯ) ರವರ ಆಪ್ತ ಸಹಾಯಕರು.
11) ಮಾಹಿತಿ ಕೇಂದ್ರ, ಶಿಕ್ಷಣ ಇಲಾಖೆ (ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಕೋರಿದೆ)
12) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.